ಬಸವನ ಬಾಗೇವಾಡಿ ಕ್ಷೇತ್ರದ ಕೊಲ್ಲಾರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮಹಿಳಾ ವೈದ್ಯಾಧಿಕಾರಿಯನ್ನು ನೇಮಿಸುವುದು

955 - ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಸವನ ಬಾಗೇವಾಡಿ ಕ್ಷೇತ್ರದ ಕೊಲ್ಲಾರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮಹಿಳಾ ವೈದ್ಯಾಧಿಕಾರಿಯ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?*

ಆ) *ಹಾಗಿದ್ದಲ್ಲಿ ಈ ಮಹಿಳಾ ವೈದ್ಯಾಧಿಕಾರಿಯು ಹುದ್ದೆಯನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?*

ಡಾ॥ ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಬಸವನ ಬಾಗೇವಾಡಿಯಲ್ಲಿರುವ ಸಾರ್ವಜನಿಕ ಆಸ್ಪತ್ರೆಯ ಕಟ್ಟಡ ಕುರಿತು

956 - ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಸವನ ಬಾಗೇವಾಡಿಯಲ್ಲಿ ಕಟ್ಟಲ್ಪಟ್ಟಿರುವ 30 ಹಾಸಿಗೆಯ ಸಾರ್ವಜನಿಕ ಆಸ್ಪತ್ರೆ ಕಟ್ಟಡವು ಎಂದು ಪೂರ್ಣಗೊಂಡಿತು?*

ಆ) *ಅಂದಿನಿಂದ ಇಂದಿನವರೆಗೆ ಈ ಆಸ್ಪತ್ರೆಯು ಕಾರ್ಯಾರಂಭ ಮಾಡದಿರುವುದಕ್ಕೆ ಕಾರಣಗಳೇನು?*

ಇ) *ಈ ಆಸ್ಪತ್ರೆಯ ಕಾರ್ಯಾರಂಭ ಮಾಡಲಿಕ್ಕೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?*

ಶ್ರೀ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ 10 ರಿಂದ 50 ಹಾಸಿಗೆಗಳ ಆಸ್ಪತ್ರೆಯಾಗಿ ಅಭಿವೃದ್ಧಿಪಡಿಸಿರುವ ಬಸವನ ಬಾಗೇವಾಡಿ ಆಸ್ಪತ್ರೆಯ ಕಟ್ಟಡ ಕಾಮಗಾರಿಯು ದಿನಾಂಕ 2.1.2000ದಂದು ಪೂರ್ಣಗೊಂಡಿರುತ್ತದೆ.

ಆ) ಆಸ್ಪತ್ರೆಯನ್ನು ಉಪಯೋಗಿಸಿಕೊಳ್ಳುವ ಪ್ರಕ್ರಿಯೆ ಪ್ರಾರಂಭವಾಗಿದೆ. ನವೀಕರಿಸಿದ ಆಸ್ಪತ್ರೆಯ ಹೊರರೋಗಿಗಳ ವಿಭಾಗವನ್ನು ಬಳಸಲಾಗುತ್ತಿದೆ.

ಇ) ಉದ್ಭವಿಸುವುದಿಲ್ಲ.